# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 1378 |
| ಮಾನ್ಯ ಸದಸ್ಯರ ಹೆಸರು | : | ಡಾ\|\| ಉಮಾಶ್ರೀ<br>(ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 18-12-2025 |
| ಉತ್ತರಿಸುವ ಸಚಿವರು | : | ಗೃಹ ಸಚಿವರು. |

<table>
<tr><th>ಕ್ರ ಸಂ</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ)</td><td>ಕಳೆದ 3 ವರ್ಷದಿಂದ ಇಲ್ಲಿಯವರೆಗೂ ರಾಜ್ಯದಲ್ಲಿ ಎಷ್ಟು ಸೈಬರ್ ವಂಚನೆ ಪ್ರಕರಣಗಳು ದಾಖಲಾಗಿವೆ: ಎಷ್ಟು ಸೈಬರ್ ವಂಚಕರನ್ನು ಬಂಧಿಸಲಾಗಿದೆ;</td><td>ರಾಜ್ಯದಲ್ಲಿ ಕಳೆದ 3 ವರ್ಷದಲ್ಲಿ ದಾಖಲಾಗಿರುವ ಸೈಬರ್ ಅಪರಾಧ ಪ್ರಕರಣಗಳು ಮತ್ತು ಬಂಧಿತ ಸೈಬರ್ ವಂಚಕರ ಸಂಖ್ಯಾ ವಿವರಗಳು ಈ ಕೆಳಕಂಡಂತಿದೆ:-
<table>
<tr><th>ವರ್ಷ</th><th>ದಾಖಲಿಸಿರುವ ಸೈಬರ್ ಅಪರಾಧ ಪ್ರಕರಣಗಳ ಸಂಖ್ಯೆ</th><th>ಬಂಧಿಸಲಾಗಿರುವ ಸೈಬರ್ ವಂಚಕರ ಸಂಖ್ಯೆ</th></tr>
<tr><td>2023</td><td>22,255</td><td>808</td></tr>
<tr><td>2024</td><td>22,478</td><td>926</td></tr>
<tr><td>2025 (ನವೆಂಬರ್ 15)</td><td>13,000</td><td>685</td></tr>
</table>
</td></tr>
<tr><td>ಆ)</td><td>2024ರ ಒಂದೇ ವರ್ಷದಲ್ಲಿ ರಾಜ್ಯದ ವಿವಿಧ ಬ್ಯಾಂಕ್ ಗಳಿಂದ ಎಷ್ಟು ಕೋಟಿ ರೂ ಸೈಬರ್ ಖಾತೆಗಳಿಗೆ ವರ್ಗಾವಣೆ ಆಗಿದೆ: ಆಗಿದ್ದಲ್ಲಿ, ಈ ರೀತಿ ಹ್ಯಾಕ್ ಆದ ಬ್ಯಾಂಕ್‌ಗಳ ವಿವರಗಳನ್ನು ಒದಗಿಸುವುದು;</td><td>ರಾಜ್ಯದಲ್ಲಿ 2024ರ ವರ್ಷದಲ್ಲಿ ವಿವಿಧ ಬ್ಯಾಂಕ್‌ಗಳಿಂದ ರೂ. 2562,63,20,830/-ಗಳು ಸೈಬರ್ ವಂಚನೆಯಾಗಿರುತ್ತದೆ.<br><br>ಎಸ್.ಬಿ.ಐ ಬ್ಯಾಂಕ್, ಕೆನರಾ ಬ್ಯಾಂಕ್, ಬ್ಯಾಂಕ್ ಆಫ್ ಬರೋಡಾ, ಯುನಿಯನ್ ಬ್ಯಾಂಕ್ ಇಂಡಿಯಾ ಮುಂತಾದ ಬ್ಯಾಂಕ್‌ಗಳಲ್ಲಿನ ಗ್ರಾಹಕರ ಖಾತೆಗಳಿಂದ ಸೈಬರ್ ವಂಚನೆಯ ಮೂಲಕ ಹಣವು ವರ್ಗಾವಣೆಯಾಗಿರುವುದು ಕಂಡುಬಂದಿದೆ.</td></tr>
<tr><td>ಇ)</td><td>ವಂಚನೆಗೆ ಒಳಗಾದ ಎಷ್ಟು ಗ್ರಾಹಕರಿಗೆ ಹಣವನ್ನು ಹಿಂದಿರುಗಿಸಲಾಗಿದೆ;</td><td>ವಂಚನೆಗೆ ಒಳಗಾದ ಗಾಹಕರಿಗೆ ಹಿಂದಿರುಗಿಸಲಾದ ಮೊತ್ತದ ವಿವರಗಳು ಈ ಕೆಳಕಂಡಂತಿದೆ:-
<table>
<tr><th>ವರ್ಷ</th><th>ಸೈಬರ್ ವಂಚನೆಯಲ್ಲಿ ಗ್ರಾಹಕರಿಗೆ ಹಿಂದಿರುಗಿಸಲಾದ ಮೊತ್ತದ ವಿವರ(ರೂಗಳಲ್ಲಿ)</th></tr>
<tr><td>2023</td><td>138,97,49,370</td></tr>
<tr><td>2024</td><td>249,78,93,163</td></tr>
<tr><td>2025 (ನವೆಂಬರ್15)</td><td>83,19,95,219</td></tr>
</table>
</td></tr>
<tr><td>ಈ)</td><td>ಸಾರ್ವಜನಿಕರು ಸೈಬರ್ ವಂಚನೆಗೆ ಒಳಗಾಗುವುದನ್ನು ತಡೆಯಲು ಸರ್ಕಾರದಿಂದ ತೆಗೆದುಕೊಂಡ ಮುಂಜಾಗ್ರತ ಕ್ರಮಗಳೇನು?</td><td>ಸರ್ಕಾರವು ಸೈಬರ್ ಅಪರಾಧ ತಡೆಯಲು ಈ ಕೆಳಕಂಡ ಕ್ರಮಗಳನ್ನು ಕೈಗೊಂಡಿರುತ್ತದೆ:-<br><br>➢ ರಾಜ್ಯದಲ್ಲಿ ಇಂಟರ್‌ನೆಟ್ ಮೊಬೈಲ್ ಫೋನ್ ಆನ್‌ಲೈನ್ ಮೂಲಕ ವಂಚನೆಗೊಳಗಾಗುತ್ತಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಅಲ್ಲದೇ ಪ್ರತಿ ದಿನ ದಾಖಲಾಗುವ</td></tr>
</table>

ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ/177/ಪಿಓಪಿ/2024, ದಿನಾಂಕ:01/08/2025ರಲ್ಲಿ ರಾಜ್ಯದ 43 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು (Cyber Crime Police Station) ಎಂದು ಮರುಪದನಾಮೀಕರಿಸಲಾಗಿದೆ. ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ Information Technology Act -2000 IPC/BNS ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗಧಿಪಡಿಸಿ ಅಧಿಸೂಚಿಸಲಾಗಿದೆ.

➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದ್ದು, ಇವರು ಸೈಬರ್ ಕ್ರೈಂ ಪೊಲೀಸ್ ಠಾಣೆಗಳ ಕಮಾಂಡಿಂಗ್ ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ DGP ಸೈಬರ್ ಕಮಾಂಡ್‌ರವರಿಗೆ ವರದಿ ಸಲ್ಲಿಸುವ ಕಾರ್ಯವನ್ನು ನಿರ್ವಹಿಸಲಾಗುತ್ತಿರುವುದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚಾಗುತ್ತಿದೆ.

➢ ಭಾರತದ ಪ್ರಥಮ ವಿಶೇಷ ಸೈಬರ್ ಪೊಲೀಸ್ ಠಾಣೆಯನ್ನು 2001ರಲ್ಲಿ ಬೆಂಗಳೂರು ನಗರದಲ್ಲಿ ಸ್ಥಾಪಿಸಲಾಯಿತು.

➢ ಸಿಐಡಿ ಅಡಿಯಲ್ಲಿ ಸೈಬರ್ ಕ್ರೈಂ ವಿಭಾಗವು ರಾಜ್ಯದ ಸೈಬರ್ ಅಪರಾಧ ತನಿಖೆಗೆ ಕೇಂದ್ರ ಕಛೇರಿ ಆಗಿದ್ದು, ಇತರೆ ಘಟಕಗಳೊಂದಿಗೆ ಸಮನ್ವಯತೆಯಿಂದ ಕಾರ್ಯ ನಿರ್ವಹಿಸುತ್ತಿದೆ.

➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಗೃಹ ಸಚಿವಾಲಯದ ಎನ್.ಸಿ.ಆರ್.ಪಿ (National Cyber Crime Reporting Portal) ನಲ್ಲಿ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅವಕಾಶವಿದ್ದು, ದೂರುಗಳನ್ನು ದಾಖಲಿಸಿದ ನಂತರ ಈ ಪೋರ್ಟಲ್ ಮುಖಾಂತರ ಪಡೆದುಕೊಂಡು ತನಿಖೆಯನ್ನು ಕೈಗೊಳ್ಳಲಾಗಿದೆ.

➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕ ನ್ಯಾಯಾಲಯವನ್ನು ಸೃಜನೆ ಮಾಡಲಾಗಿರುತ್ತದೆ.

➢ ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂಗೆ ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯನ್ನು ಕೈಗೊಳ್ಳಲು ಪೊಲೀಸ್ ಇನ್ಸ್ ಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ/ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಲಾಗಿದೆ.

➢ ಠಾಣಾ ಸರಹದ್ದಿನಲ್ಲಿ ಬರುವಂತಹ ಕಂಪನಿಗಳು, ಶಾಲಾ ಕಾಲೇಜುಗಳು, ಅಪಾರ್ಟ್‌ಮೆಂಟ್ ಪಾರ್ಕ್ ಮುಂತಾದ ಸ್ಥಳಗಳಲ್ಲಿ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಕಾರ್ಯ ಕ್ರಮಗಳನ್ನು ಕೈಗೊಳ್ಳಲಾಗಿದೆ.

➢ ಟಿ.ವಿ ಮಾಧ್ಯಮ ಮತ್ತು ಪತ್ರಿಕಾ ಮಾಧ್ಯಮಗಳಲ್ಲಿ ಡಿಜಿಟಲ್ ಅರೆಸ್ಟ್ ಬಗ್ಗೆ ಜಾಹೀರಾತು ನೀಡಲಾಗಿರುತ್ತದೆ.

➢ ಸೈಬರ್ ಅಪರಾಧ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಪತ್ತೆ ಹಚ್ಚುವ ಸಂಬಂಧ ಸೈಬರ್ ಕಮಾಂಡರ್ ಯುನಿಟ್

| | | |
|---|---|---|
| | | ರಚನೆಯಾಗಿರುತ್ತದೆ.<br>➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳೊಂದಿಗೆ ಮಾಸಿಕ ಸಭೆಗಳನ್ನು ಕರೆಯುವ ಮೂಲಕ ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>➢ ಸಿಸಿಯು ಘಟಕದಿಂದ ಸಾಮಾಜಿಕ ಜಾಲತಾಣಗಳಾದ ಫೇಸ್ ಬುಕ್, ವಾಟ್ಸ್‌ಆಪ್ ಹಾಗೂ ಟ್ವೀಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲಾಗುತ್ತಿದೆ. ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಸೈಬರ್ ವಂಚನೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.<br>➢ ಸೈಬರ್ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲು ಐಟಿ ಕಾಯ್ದೆ ಹಾಗೂ BNS ಕಾಯ್ದೆಯ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಲಾಗುತ್ತಿದೆ.<br>➢ ಸಾರ್ವಜನಿಕರನ್ನು ಇಂತಹ ಅಪರಾಧಿಕ ಕೃತ್ಯಗಳ ಮೂಲಕ ವಂಚಿಸಲು ನಕಲಿ ಸಿಮ್‌ಕಾರ್ಡ್ ಹಾಗೂ ನಕಲಿ ಬ್ಯಾಂಕ್ ಖಾತೆಗಳನ್ನು ಮಾರಾಟಕ್ಕೆ ಬಳಸುವ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ಟೆಲಿಗ್ರಾಂ, ಇತರೆ ಅಂತರ್ಜಾಲ ವೇದಿಕೆಗಳಲ್ಲಿ ಸಕ್ರಿಯವಾಗಿರುವ ಖಾತೆಗಳು ಹಾಗೂ ಗುಂಪುಗಳನ್ನು ಪತ್ತೆಹಚ್ಚಿ, 268 ಫೇಸ್‌ಬುಕ್ ಗುಂಪುಗಳು, 465 ಟೆಲಿಗ್ರಾಂ ಗುಂಪುಗಳು, 15 ಇನ್‌ಸ್ಟಾಗ್ರಾಂ ಖಾತೆಗಳು ಹಾಗೂ 61 ವಾಟ್ಸ್‌ಆಪ್ ಗುಂಪುಗಳನ್ನು ನಿಷ್ಕ್ರೀಯಗೊಳಿಸಲಾಗಿರುತ್ತದೆ.<br>➢ ಸೈಬರ್ ಅಪರಾಧ ಸಹಾಯವಾಣಿಗಳಿಗೆ "ಗೋಲ್ಡನ್ ಅವರ್" ನಲ್ಲಿ ಬರುವ ದೂರುಗಳನ್ನು ಸ್ವೀಕರಿಸಲು ಕರ್ನಾಟಕ ಪೊಲೀಸ್ ಇಲಾಖೆ 1930 ಹೆಲ್ಪ್‌ಲೈನನ್ನು ವೆಬ್ ಬಾಟ್ ಸೌಲಭ್ಯದಿಂದ ಉನ್ನತೀಕರಿಸಿದೆ. ಇದರಿಂದ SMS ಮುಖಾಂತರ ಸ್ವಯಂ ಮಾಹಿತಿ ನೋಂದಣಿ ಮಾಡಿಕೊಳ್ಳಬಹುದಾಗಿರುತ್ತದೆ. ದೂರುಗಳನ್ನು "ಹಣಕಾಸು ಮತ್ತು ಹಣಕಾಸೇತರ" ಎಂದು ವಿಂಗಡಿಸುವ IVR ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಹೆಚ್ಚು ಕರೆಗಳು ಬಂದಾಗ ಆಟೋಮೇಟೆಡ್ ಕರೆ ವ್ಯವಸ್ಥೆ ಮೂಲಕ ಧ್ವನಿ ಮಾರ್ಗದರ್ಶನ ಸೌಲಭ್ಯವಿರುತ್ತದೆ. ದೂರುದಾರರು ತಮ್ಮ ದೂರಿನ ಸ್ಥಿತಿ ಹಂತವನ್ನು ತಿಳಿದುಕೊಳ್ಳಬಹುದಾಗಿರುತ್ತದೆ. 24/7 ಕಾಲ್ ಸೆಂಟರ್ ಕರ್ತವ್ಯ ನಿರ್ವಹಿಸುತ್ತಿರುತ್ತದೆ. |

**ಸಂಖ್ಯೆ: ಹೆಚ್‌ಡಿ 106 ಪಿಸಿಕ್ಯೂ 2025**

**( ಡಾ|| ಜಿ.ಪರಮೇಶ್ವರ )**

ಗೃಹ ಸಚಿವರು